# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**
**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 962(964)**
**ಉತ್ತರಿಸಬೇಕಾದ ಸಚಿವರು : ಕೃಷಿ ಸಚಿವರು**
**ಉತ್ತರಿಸಬೇಕಾದ ದಿನಾಂಕ : 25/08/2026**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದೋಷಪೂರಿತ ರೋಸ್ಟರ್ ಅಳವಡಿಸಿರುವ 24-01-2019ರ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯನ್ನು ರದ್ದುಪಡಿಸಿ, ಹೊಸ ನೇಮಕಾತಿ ಅಧಿಸೂಚನೆ ಹೊರಡಿಸುವುದಾಗಿ ಕೃಷಿ ಇಲಾಖೆ ಪ್ರಮಾಣಪತ್ರ ಸಲ್ಲಿಸಿದ ನಂತರ ಈವರೆಗೆ ಕೈಗೊಂಡಿರುವ ಕ್ರಮಗಳೇನು; ಹೊಸ ಅಧಿಸೂಚನೆ ಹೊರಡಿಸಲು ನಿಗದಿತ ಕಾಲಮಿತಿ ಏನು; | ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗವು ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ: 24-01-2019 ರಂದು – 100 ಹುದ್ದೆಗಳು (ಮಿಕ್ಕುಳಿದ ವೃಂದ) ಮತ್ತು ದಿನಾಂಕ: 24-01-2019ರಂದು 9 ಹುದ್ದೆಗಳ (ಸ್ಥಳೀಯ ವೃಂದ-ಕಲ್ಯಾಣ ಕರ್ನಾಟಕ) ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.<br><br>ಸದರಿ ಅಧಿಸೂಚನೆಯಲ್ಲಿ ಲೋಪವಿರುವುದಾಗಿ ತಿಳಿಸುತ್ತಾ, ಅರ್ಜಿದಾರರಾದ ಡಾ\|\| ಪವನ್ ಮತ್ತು ಇತರರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಿ:26/02/2019ರಂದು ಪ್ರಕರಣವನ್ನು ದಾಖಲಿಸಿರುತ್ತಾರೆ. ಸದರಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸರ್ಕಾರದ ವತಿಯಿಂದ ದಿನಾಂಕ:21/01/2020ರಂದು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಅರ್ಜಿದಾರರು ದಾಖಲಿಸಿರುವ ರಿಟ್ ಪಿಟಿಷನ್‌ರಲ್ಲಿನ ಅಂಶಗಳನ್ನು ಪರಿಗಣಿಸದೇ ಇರುವಂತೆ ಕೋರಿ ಅಫಿಡವಿಟ್‌ನ್ನು ದಾಖಲಿಸಿರುತ್ತದೆ.<br><br>ಏತನ್ಮಧ್ಯೆ, ಮಾನ್ಯ ಉಚ್ಚನ್ಯಾಯಾಲಯವು ದಿ:12/01/2023ರಂದು ವಿಚಾರಣೆಯನ್ನು ನಡೆಸಿ, ವಿಶ್ವವಿದ್ಯಾಲಯವು ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ನೇಮಕಾತಿ ಆದೇಶ ಹೊರಡಿಸಲು ಷರತ್ತುಬದ್ಧ ಅನುಮತಿ ನೀಡಿರುತ್ತದೆ. ಅದರಂತೆ ಮಾನ್ಯ ಉಚ್ಚನ್ಯಾಯಾಲಯದ ಅನುಮತಿ ಮೇರೆಗೆ ರಿಟ್ ಪಿಟಿಷನ್ ಸಂಖ್ಯೆ: 9861/2019ರ ಅಂತಿಮ ತೀರ್ಪಿಗೆ ಒಳಪಟ್ಟು ಒಟ್ಟು 104 ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇಮಕಾತಿ ಆದೇಶವನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗವು ಹೊರಡಿಸಿರುತ್ತದೆ. |

| | | |
|---|---|---|
| ಆ) | ಇಲಾಖೆ ರೋಸ್ಟರ್‌ನಲ್ಲಿ ಲೋಪವಿರುವುದನ್ನು ಒಪ್ಪಿಕೊಂಡಿರುವ ಹಿನ್ನೆಲೆಯಲ್ಲಿ, ಸಂಬಂಧಿತ ಪ್ರಕರಣವನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಸರ್ಕಾರ ಕೈಗೊಂಡಿರುವ ಕಾನೂನು ಕ್ರಮಗಳೇನು; ಪರಿಶಿಷ್ಟ ಜಾತಿಯ ಅಭ್ಯರ್ಥಿಗಳಿಗೆ ಅವಕಾಶ ವಂಚನೆಗೆ ಕಾರಣವೇನು; ಈ ಕುರಿತು ಸರ್ಕಾರ ಕೈಗೊಂಡ ಕಾನೂನು ಕ್ರಮಗಳೇನು; | ತದನಂತರ ಸರ್ಕಾರದ ಹಂತದಲ್ಲಿ ರಿಟ್ ಪಿಟಿಷನ್ ಅರ್ಜಿಯನ್ನು ಮರುಪರಿಶೀಲಿಸಿದ ನಂತರ ಹಾಗೂ ಅಂತರ್ ಇಲಾಖೆಯ ಸಮಾಲೋಚನೆ ನಂತರ, ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ವತಿಯಿಂದ ಹೊರಡಿಸಲಾದ ಅಧಿಸೂಚನೆಯನ್ನು ಹಿಂಪಡೆಯುವುದು ಹಾಗೂ Subject-wise-Roaster ರನ್ವಯ, ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗಾಗಿ ಹೊಸದಾಗಿ ವಿಶ್ವವಿದ್ಯಾಲಯದ ವತಿಯಿಂದ ಅಧಿಸೂಚನೆಯನ್ನು ಪ್ರಕಟಿಸಬೇಕಾಗಿರುತ್ತದೆಂಬುದಾಗಿ ಸರ್ಕಾರದಿಂದ ದಿನಾಂಕ:06/10/2023ರಂದು ಅಫಿಡವಿಟ್‌ನ್ನು ದಾಖಲಿಸಿ, ಪ್ರಸಕ್ತ ಪ್ರಕರಣವನ್ನು ವಿಲೇಮಾಡುವಂತೆ ಕೋರಲಾಗಿರುತ್ತದೆ. ಪ್ರಸ್ತುತ ಪ್ರಕರಣವು ಮಾನ್ಯ ಉಚ್ಚನ್ಯಾಯಲಯದಲ್ಲಿ ಬಾಕಿ ಇರುತ್ತದೆ.<br><br>ಸರ್ಕಾರದಿಂದ ಮಾನ್ಯ ಉಚ್ಚನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣವನ್ನು ತ್ವರಿತವಾಗಿ ಇತ್ಯರ್ಥಗೊಳಿಸುವಂತೆ ಕೋರಿ ಅಫಿಡವಿಟ್‌ನ್ನು ದಾಖಲಿಸಿದ್ದು, ಪ್ರಕರಣವು ವಿಚಾರಣೆಗೆ ಬಂದ ಸಂದರ್ಭದಲ್ಲಿ ಸರ್ಕಾರಿ ವಕೀಲರನ್ನು ಸಂಪರ್ಕಿಸಿ ಪ್ರಕರಣವನ್ನು ಶೀಘ್ರವಾಗಿ ವಿಲೇ ಮಾಡುವಂತೆ ಮೌಖಿಕವಾಗಿ ವಿನಂತಿಸಲಾಗಿರುತ್ತದೆ. |
| ಇ) | ಆರ್ಥಿಕ ಇಲಾಖೆಯ ಅನುಮೋದನೆಯಿಲ್ಲದೆ ಹೆಚ್ಚುವರಿ ಸಹಾಯಕ ಪ್ರಾಧ್ಯಾಪಕರನ್ನು ನೇಮಕ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;<br><br>2023ರಿಂದ ಇಲ್ಲಿಯವರೆಗೆ HRMS ಮೂಲಕ ಅನುಮೋದಿತ ಹುದ್ದೆಗಳಿಗೆ ಹಾಗೂ ಹೆಚ್ಚುವರಿ/ ಅನುಮೋದನೆಯಿಲ್ಲದ ಹುದ್ದೆಗಳಿಗೆ ಪ್ರತ್ಯೇಕವಾಗಿ ಸರ್ಕಾರದ ಖಜಾನೆಯಿಂದ ಪಾವತಿಸಿರುವ ವೇತನದ ಒಟ್ಟು ಮೊತ್ತ ಎಷ್ಟು; | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ಉದ್ಭವಿಸುವುದಿಲ್ಲ. |
| ಈ) | ಅನುಮೋದನೆಯಿಲ್ಲದ ಹುದ್ದೆಗಳಿಗೆ ನಿಯಮಬಾಹಿರವಾಗಿ ಪ್ರತಿ ತಿಂಗಳು ವೇತನ ಪಾವತಿಸಲು ಅವಕಾಶವಿದೆಯೇ; ಸರ್ಕಾರದ ಹಣಕಾಸು ನಿಯಮಗಳ ಉಲ್ಲಂಘನೆಯಾಗಿದ್ದರೆ, ಹೊಣೆಗಾರರಿಂದ ಮೊತ್ತ ವಸೂಲಿ ಮಾಡುವ ಕ್ರಮ ಕೈಗೊಳ್ಳಲಾಗಿದೆಯೇ; | ವಿಶ್ವವಿದ್ಯಾಲಯವು ನಿಯಮಬಾಹಿರವಾಗಿ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಂಡಿರುವುದಿಲ್ಲವಾದ್ದರಿಂದ, ನಿಯಮಬಾಹಿರವಾಗಿ ವೇತನ ಪಾವತಿಸಿರುವುದಿಲ್ಲ ಹಾಗೂ ಹಣಕಾಸು ನಿಯಮಗಳ ಉಲ್ಲಂಘನೆಯಾಗಿರುವುದಿಲ್ಲ. |

| | | |
|---|---|---|
| ಉ) | ಮೇಲ್ಕಂಡ ಪ್ರಕರಣ ಬಾಕಿಯಿರುವ ಸಂಧರ್ಭದಲ್ಲಿ ಷರತ್ತುಬದ್ಧವಾಗಿ ನೇಮಕಗೊಂಡ ಸಹಾಯಕ ಪ್ರಾಧ್ಯಾಪಕರ ಪ್ರೊಬೇಷನ್ ಅವಧಿ ತೃಪ್ತಿಕರವಾಗಿ ಪೂರ್ಣಗೊಂಡಿದೆ ಎಂದು ಆದೇಶಿಸುವುದು ಹಾಗೂ ಬೆಂಗಳೂರಿನ ಕೃಷಿ ವಿಶ್ವವಿದ್ಯಾಲಯಕ್ಕೆ ವರ್ಗಾವಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಂತಹ ಆದೇಶ ಹೊರಡಿಸಿದ ವಿಶ್ವವಿದ್ಯಾಲಯದ ಸಂಬಂಧಪಟ್ಟ ಪದಾಧಿಕಾರಿ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? | ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ 57ನೇ ವ್ಯವಸ್ಥಾಪನ ಮಂಡಳಿ ಸಭೆಯ ನಿರ್ಣಯದಂತೆ ಸಹಾಯಕ ಪ್ರಾಧ್ಯಾಪಕರುಗಳಿಗೆ ಪ್ರೊಬೇಷನರಿ ಅವಧಿ ತೃಪ್ತಿಕರವಾಗಿದೆ ವಿಶ್ವವಿದ್ಯಾಲಯದ ಹಂತದಲ್ಲಿ ಘೋಷಿಸಲಾಗಿರುತ್ತದೆ.<br><br>ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸಿಬ್ಬಂದಿಗಳು ಬೆಂಗಳೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ವರ್ಗಾವಣೆಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಸರ್ಕಾರದಿಂದ ನೂತನವಾಗಿ ಮಂಡ್ಯದ ವಿ.ಸಿ.ಫಾರಂನಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯವನ್ನು ದಿ:24/05/2025ರ ಅಧಿಸೂಚನೆಯನ್ವಯ ಸ್ಥಾಪಿಸಲಾಗಿರುತ್ತದೆ. ಸದರಿ ಅಧಿನಿಯಮದಲ್ಲಿ ಕಲ್ಪಿಸಲಾಗಿರುವ ಅವಕಾಶಗಳನ್ವಯ ವರ್ಗಾವಣೆ (ಪ್ರತ್ಯಾವರ್ತನೆ) ಪ್ರಕ್ರಿಯೆಯು ಕೈಗೊಳ್ಳಲಾಗಿರುತ್ತದೆ.<br><br>ಆದರೆ, ದಿನಾಂಕ:12-01-2023ರ ಮಾನ್ಯ ಉಚ್ಛನ್ಯಾಯಾಲಯದ ಆದೇಶದ ಅಂತಿಮ ತೀರ್ಪಿಗೆ ಒಳಪಟ್ಟು ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು ಹೊರಡಿಸಲಾಗಿರುವುದರಿಂದ, ಈ ಪ್ರಕ್ರಿಯೆಗಳೂ ಸಹ ಮಾನ್ಯ ಉಚ್ಛ ನ್ಯಾಯಾಲದಯ ಅಂತಿಮ ಆದೇಶದ ಷರತ್ತಿಗೆ ಒಳಪಟ್ಟಿರುತ್ತದೆ. |

ಇ-ಸಂಖ್ಯೆ: AGRI/29/AUS/2026.

P. M. Narendraswamy

**(ಪಿ.ಎಂ. ನರೇಂದ್ರ ಸ್ವಾಮಿ)**
ಕೃಷಿ ಸಚಿವರು.